ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

File No: DTE-ADMI0ACM2/116 /2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆರಸ್ತೆ, ಬೆಂಗಳೂರು - 560 001.
ದಿನಾಂಕ:18-09-2021

ಸು ತ್ತೋ ಲೆ

ವಿಷಯ: 2021–22ನೇ ಶೈಕ್ಷಣಿಕ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ನಿಗಧಿಪಡಿಸಲಾಗಿರುವ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯ ಕುರಿತು.

****

ರಾಜ್ಯದ ಎಲ್ಲಾ ಡಿಪ್ಲೋಮಾ ಕಾಲೇಜುಗಳಲ್ಲಿ ಸರ್ಕಾರದ ಆದೇಶ ಸಂ. ಇಡಿ 197 ಯುಎನ್‌ಇ 2020, ದಿ:23-07-2021 ರನ್ವಯ ಅನುಸರಿಸಬೇಕಾದ ಪ್ರಮಾಣಿತ ಕಾರ್ಯಚರಣಾ ವಿಧಾನದ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು 2021–22ನೇ ಶೈಕ್ಷಣಿಕ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಿ, ಪ್ರಥಮ ಸೆಮಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ನಿಗಧಿತ ಅವಧಿಯೊಳಗೆ ಪಾಠ ಪ್ರವಚನಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ನಿಗಧಿಪಡಿಸಲಾಗಿದೆ.

ಕ್ರ.ಸಂ.	ಶೈಕ್ಷಣಿಕ ಕಾಯಕ್ರಮ	ಅವಧಿ/ದಿನಾಂಕ	
		ಪ್ರಾರಂಭ	ಮುಕ್ತಾಯ
01.	ಹಗಲು ಪಾಳೀಯ 01ನೇ ಸೆಮಿಸ್ಟರ್‌ನ ತರಗತಿಗಳು ಹಾಗೂ ಪಾರ್ಟ್‌ಟೈಮ್ 01 ನೇ ಸೆಮಿಸ್ಟರ್‌ನ ತರಗತಿಗಳು	01-10-2021	31-01-2022

(*2021–22ನೇ ಸಾಲಿನ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯ, ತುರ್ತು ಅಗತ್ಯ ನೈಸರ್ಗಿಕ ಪರಿಸ್ಥಿತಿಗೆ ಅನುಗುಣವಾಗಿ, ಅಲ್ಪಬದಲಾವಣೆಗೆ ಒಳಪಟ್ಟಿರುತ್ತೆ*)

ಕೋವಿಡ್–19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಮುನ್ನೆಚರಿಕೆ ಕ್ರಮಗಳನ್ನು ಅನುಸರಿಸಿ, ಪ್ರಥಮ ಸೆಮಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ನಿಯಮಾನುಸಾರ ಸಿ-20 ಪಠ್ಯಕ್ರಮದಲ್ಲಿ ತಿಳಿಸಿರುವಂತೆ ಮೊದಲ 15 ದಿವಸಗಳು Induction Program ನಡೆಸಿ ನಂತರ ತರಗತಿಗಳನ್ನು ನಡೆಸುವುದು. ಪ್ರಯುಕ್ತ, ಇದನ್ನು ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪಾಠ ಪ್ರವಚನಗಳನ್ನು ಮುಕ್ತಾಯಗೊಳಿಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

ಹಗಲು ಪಾಳೀಯ 03 ಮತ್ತು 05ನೇ ಸೆಮಿಸ್ಟರ್ ತರಗತಿಗಳು ಹಾಗೂ ಪಾರ್ಟ್‌ಟೈಂ ನ 02, 04, 06ನೇ ಸೆಮಿಸ್ಟರ್‌ನ ತರಗತಿಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ ಹಾಗೂ ಅನುಸರಣೆಗಾಗಿ.